## ॥ ಶ್ರೀ ತುಳಸಿಯಾ ಸೇವಿಸಿ ॥

ಶ್ರೀ ತುಳಸಿಯಾ ಸೇವಿಸಿ ॥ ಪ ॥

ಶ್ರೀ ತುಳಸಿಯಳಾ ಸೇವೆ ಪ್ರೀತಿಯಿಂದಲಿ ಮಾಡೆ ।
ಗಾತರದ ಮಲವಳಿದು ಮಾತೆಯೆಂಬನಿತರೊಳು ।
ಪಾತಕ ಪರಿಹರಿಸಿ ಪುನೀತರನು ಮಾಡುವಳು ಯಾತಕನುಮಾನವಯ್ಯ ॥ ಅ. ಪ ॥

ಸುಧೆಗಡಲ ಮಥಿಸುವ ಸಮಯದಲಿ ವೈದ್ಯನಾಗಿ ।
ಪದುಮನಾಭನು ತಾನು ಉದುಭವಿಸಿ ಬರಲಂದು ಉದುರಿದವು ಕಣ್ಣಿಂದ ।
ಉದಕವುತ್ಸಹದಿಂದಲದೆ ತುಳಸಿನಾಮವಾಗೆ ।
ತ್ರಿದಶರೊಂದಿಸುತ ಮೋದದಿಂ ಕೊಂಡಾಡಿದರು ।
ಒದಗಿ ಸುಜನರು ತಮ್ಮ ಸದನದಲ್ಲಿ ನಿತ್ಯ ಸ ।
ತ್ಪದವಿಗೆ ಸಿದ್ಧವೆಂದು ಮುದದಿಂದ ತಿಳಿದು ವೃಂದಾವನ ರಚಿಸಿದರೈಯ್ಯಾ ॥ ೧ ॥

ಮೂಲದಲಿ ಸರ್ವತೀರ್ಥಗಳುಂಟು ತನ್ಮಧ್ಯೆ ।
ಕಾಲಮೀರದೆ ಸರ್ವ ನದನದಿಗಳಮರಗಣ ।
ಮೇಲೆ ದಳ ಒಂದರಲಿ ಒಂದೊಂದು ಮೂರುತಿಯು ವಾಲಯವಾಗಿಪ್ಪುದು ।
ಮೂಲೋಕಗಳ ಧರ್ಮ ವ್ರತಕೆ ಮಿಗಿಲೆನಿಸುವುದು ।
ನೀಲಮೇಘಶ್ಯಾಮಗರ್ಪಿಸಿದ ತುಳಸಿ ನಿರ್ಮಾಲ್ಯವನು
ಸತತ ಕರ್ಣದಲಿ ಧರಿಸಿದ ಮನುಜ ಕಾಲನಾಳಿಗೆ ಶೂಲನೊ ॥ ೨ ॥

ಉದಯದೊಳಗೆದ್ದು ನೀರೆರೆದು ಮಜ್ಜನಗೈದು ।
ತುದಿ ಬೆರಳಿನಿಂದ ಮೃತ್ತಿಕೆಯ ಫಣಿಯೊಳಗಿಟ್ಟು ।
ಮುದದಿಂದಲೊಂದು ಪ್ರದಕ್ಷಿಣೆ ನಮಸ್ಕಾರ ತದನಂತರದಲ್ಲಿ ಭಜನೆ ।
ವದನದೊಳು ಗೈಯ ಧರೆಯೊಳಗಿದ್ದ ಸರ್ವನದ ।
ನದಿಗಳಿಗೆ ನೂರ್ಮಡಿಯಾತ್ರೆ ಮಾಡಿದ ಫಲ ।
ಒದಗುವುದು ಹಿಂದಣಾನಂತ ಜನ್ಮಗಳಘವ ತುದಿಮೊದಲು ದಹಿಪುದಯ್ಯಾ ॥ ೩ ॥

ಆವವನ ಮನೆಯಲ್ಲಿ ತುಳಸಿ ಸಾಲಿಗ್ರಾಮ ।
ಆವವನ ಮನೆಯಲ್ಲಿ ಹರಿದಾಸರಾಕೂಟ ।
ಅವವನ ಭುಜದಲ್ಲಿ ತಪ್ತಮುದ್ರಾಂಕಿತವು ಪಾವಮಾನಿಯ ಮತದೊಳು ।

ಆವವನು ಕಾಲತ್ರಯವ ಕಳೆವನಾವಲ್ಲಿ ।
ಶ್ರೀ ವಾಸುದೇವ ಮುನಿದೇವಾದಿ ಗಣಸಹಿತ ।
ಕಾವುತ್ತಲಿಪ್ಪ ಬಲಿಗೊಲಿದಂತೆ ತೊಲಗದಲೆ ॥ ೪ ॥

ಕಂಡರೆ ದುರಿತಕ್ಕೆ ಕೆಂಡವನು ಬೀರುವುದು ।
ಕೊಂಡಾಡಿದರೆ ಪುಣ್ಯವಪರಿಮಿತಿವುಂಟು ಮೈ- ।
ದಿಂಡುಗೆಡಹಿದರೆ ಪುನರಪಿ ಜನನವಿಲ್ಲ ಸಲೆ ದಂಡವಿಟ್ಟವ ಮುಕ್ತನೊ ।
ಚಂಡಾಲ ಕೇರಿಯೊಳು ಇರಲು ಹೀನಯವಲ್ಲ ।
ಪಾಂಡುರಂಗಕ್ಷೇತ್ರ ಸರಿಮಿಗಿಲು ಎನಿಸುವುದು ।
ತಂಡತಂಡದ ಕುಲಕೆ ಅವರವರ ಯೋಗ್ಯಫಲ ಕಂಡವರಿಗುಂಟೆ ಅಯ್ಯಾ ॥ ೫ ॥

ಚಿತ್ತಶುದ್ದನು ಆಗಿ ಮುಂಜಾನೆಯೊಳು ತುಳಸಿ ।
ಸ್ತೋತ್ರವನೆ ಮಾಡುತ್ತ ದಿವ್ಯವಾಗಿಹ ತ್ರಿದಳ ।
ಪ್ರತ್ಯೇಕ ಪಾತ್ರೆಯಲಿ ತೆಗೆದು ಶೋಧಿಸಿ ತುಂಬಿ ವಿತ್ತಾದಿಯಲಿ ತಾರದೆ ।
ಮತ್ತೆ ವಸ್ತ್ರದಿ ಹಸ್ತ ಶಿಲೆಯರ್ಕ ಏರಂಡ ।
ಪತ್ರದಲಿ ತಾರದಲೆ ಭೂಮಿಯೊಳಗಿಡದೆ ಪೂ ।
ರ್ವೋತ್ತರಭಿಮುಖನಾಗಿ ಭಕ್ತಿಯಿಂ ತರಬೇಕು ಹೊತ್ತು ಮೀರಿಸಲಾಗದೊ ॥ ೬ ॥

ಕವಿಮಂಗಳವಾರ ವೈಧೃತಿ ವ್ಯತೀಪಾತ ।
ರವಿಶಶಿಯ ಸಂಗಮ ಪರ್ವಣಿ ಪುಣ್ಯಕಾಲ ।
ದಿವಸ ದ್ವಾದಶಿ ಶ್ರೇಷ್ಠ ಉಪರಾಗ ಪಿತೃಶ್ರಾದ್ಧ ಇವುಗಳಲಿ ತೆಗೆಯದಿರಿ ।
ನವವಸನ ಪೊದ್ದು ಊಟಮಾಡಿ ತಾಂಬೂಲ ।
ಸವಿಯುತ್ತ ಮುಟ್ಟದಿರಿ ಯುವತಿ ಶೂದ್ರರಿಂ ತರಿಸುವುದು ।
ಚಿತ್ತವಲ್ಲೆಂದು ತಿಳಿದು ಕೊಂಡಾಡುತಿರಿ ದಿವಸ ದಿವಸಗಳೊಳಯ್ಯಾ ॥ ೭ ॥

ದಳವಿದ್ದರೇ ಒಳಿತು ಇಲ್ಲದಿದ್ದರೆ ಕಾಷ್ಠ ।
ಎಲೆ ಮೃತ್ತಿಕೆಗಳಿಂದ ಪೂಜೆ ಮಾಡಲಿಬಹುದು ।
ತುಳಸಿ ನಿರ್ಮಾಲ್ಯವಾದರು ತೊಳೆತೊಳೆದು ಏರಿಸಲಿಬಹುದು ।
ತುಳಸಿ ಒಣಗಿದ್ದರೂ ಲೇಶದೋಷಗಳಿಲ್ಲ ।
ತುಳಸಿ ವಿರಹಿತವಾದ ಪೂಜೆಯದು ಸಲ್ಲದು ।
ತುಳಸಿ ತುಳಸಿ ಎಂದು ಸ್ಮರಣೆಯಾದರು ಮಾಡಿ ಜಲಜಾಕ್ಷನರ್ಚಿಸಿರೈಯ್ಯಾ ॥ ೮ ॥

ತುಳಸಿ ಇಲ್ಲದ ಸದನ ಹೊಲೆಮಾದಿಗರ ಸದನ ।
ತುಳಸಿ ಇಲ್ಲದ ಬೀದಿ ನರಕಕೆಳಸುವ ಹಾದಿ ।
ತುಳಸಿ ಇಲ್ಲದ ತೀರ್ಥವೆಂದಿಗಿದ್ದರು ವ್ಯರ್ಥ ತುಳಸಿ ಬಲು ಪ್ರಾಧಾನ್ಯವೊ ।
ತುಳಸಿ ಮಿಶ್ರಿತವಾದ ನೈವೇದ್ಯಗತಿಸಾಧ್ಯ ।
ತುಳಸಿ ಧರಿಸಿದ ದೇಹ ಪರಮಸಾರ್ಥಕವಯ್ಯ ।
ತುಳಸಿ ದಳ ಹರಿಗೆ ಅರ್ಪಿಸಿದವನ ಪುಣ್ಯಕ್ಕೆ ನೆಲೆಯ ನಾ ಕಾಣೆನಯ್ಯಾ ॥ ೯ ॥

ಶಿವನಸತಿ ಪ್ರಹ್ಲಾದ ನಾರದ ವಿಭೀಷಣನು ।
ಧ್ರುವ ಅಂಬರೀಷ ಶಶಿಬಿಂದು ರುಕ್ಮಾಂಗದನು ।
ಇವರೆ ಮೊದಲಾದವರು ಭಕ್ತಿಪೂರ್ವಕದಲಿ ವಿವರವನು ತಿಳಿದರ್ಚಿಸಿ ।
ತವಕದಿಂ ತಂತಮ್ಮ ಘನಪದವನೈದಿದರು ।
ಭುವನದೊಳಗುಳ್ಳ ನಿರ್ಮಲ ಜನರು ಭಜಿಸಿದರು ।
ಜವಭಟರನೋಡಿಸೀ ಜಡದೇಹವನು ನೀಗಿ ಭವದೂರರಾದರೈಯ್ಯಾ ॥ ೧೦ ॥

ಉದಯಕಾಲದೊಳೆದ್ದು ಆವನಾದರು ತನ್ನ
ಹೃದಯನಿರ್ಮಲನಾಗಿ ಭಕ್ತಿಪೂರ್ವಕದಿಂದ ।
ಸದಮಲಾ ತುಳಸಿಯನು ಸ್ತೋತ್ರಮಾಡಿದ ಕ್ಷಣಕೆ ಮದಗರ್ವ ಪರಿಹಾರವೋ ।
ಇದೆ ತುಲಸಿ ಸೇವಿಸಲು ಪೂರ್ವದಲಿ ಕಾವೇರಿ ।
ನದಿಯ ತೀರದಲೊಬ್ಬ ಭೂಸುರ ಪದಕೆ ಪೋದ ।
ಪದಪದೆಗೆ ಸಿರಿವಿಜಯವಿಟ್ಠಲಗೆ ।
ಪ್ರಿಯಳಾದ ಮದನತೇಜಳ ಭಜಿಸಿರೈಯ್ಯಾ ॥ ೧೧ ॥